ಈ ರೀತಿಯ ಹೇಯ ಅಪರಾಧ ಕೃತ್ಯಗಳನ್ನು ಸರ್ಕಾರವು ಗಂಭೀರವಾಗಿ ಪರಿಗಣಿಸಿದ್ದು, ಕಟ್ಟುನಿಟ್ಟಿನ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವಂತೆ ಪೊಲೀಸ್ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ.

ಮಹಿಳೆಯರ ಟ್ರಯಲ್ ರೂಂಗಳಲ್ಲಿ ಮತ್ತು ಖಾಸಗಿ ಹೋಟೆಲ್‌ಗಳಲ್ಲಿರುವ ಮಹಿಳೆಯರ ಶೌಚಾಲಯಗಳಲ್ಲಿ ರಹಸ್ಯ ಕ್ಯಾಮರಾಗಳನ್ನು ಅಳವಡಿಸಲಾಗಿದೆ ಎಂದು ಹೇಳಿದ್ದಾರೆ, ಎರಡು ಪ್ರಕರಣಗಳು ನಮ್ಮ ನೋಟೀಸಿಗೆ ಬಂದಿದ್ದು, ಯಾರು ಪ್ರಕರಣದಲ್ಲಿ ಭಾಗಿಯಾಗಿದ್ದಾರೆ, ಅವರನ್ನು ಬಂಧಿಸಿ ಕ್ರಮ ಜರುಗಿಸಿದ್ದೇವೆ. ಇದಲ್ಲದೆ ಎಲ್ಲಾ ಹೋಟೆಲ್‌ನವರಿಗೆ, ಬಟ್ಟೆ ಅಂಗಡಿಯವರಿಗೆ ಈ ರೀತಿ ಮಾಡಬಾರದು, ಇದು ಕಾನೂನು ಬಾಹಿರ ಎಂದು ತಿಳಿಸಲು ಪ್ರತಿಯೊಂದು ಪೊಲೀಸ್ ಠಾಣೆಗಳಿಗೆ ಆದೇಶ ನೀಡಿದ್ದೇವೆ. ಎರಡನೇ ವಿಚಾರ ಮಹಿಳೆಯರ ಮತ್ತು ಹೆಣ್ಣುಮಕ್ಕಳ ಮೇಲೆ ನಡೆಯುತ್ತಿರುವ ಅತ್ಯಾಚಾರದ ಕುರಿತು ಈಗಾಗಲೇ ನಾನು ಸಾಕಷ್ಟು ಹೇಳಿದ್ದೇನೆ. ತಾವು ಇನ್ನೊಂದು ಚರ್ಚೆಗೆ ಅವಕಾಶ ಕೊಡುತ್ತಿದ್ದೀರಿ, ಆ ಸಂದರ್ಭದಲ್ಲಿ ನಾನು ಉತ್ತರವನ್ನು ಕೊಡುತ್ತೇನೆ.

ಅಧ್ಯಕ್ಷರು: ಆಯಿತು, ಈಗ ಚಿಮ್ಮನಕಟ್ಟಿ ಬಿ. ಭೀಮಪ್ಪರವರು.

7. ವಿಷಯ: ಬಾಗಲಕೋಟೆ ಜಿಲ್ಲೆಯ ಬಾದಾಮಿಯಲ್ಲಿ ಲಲಿತಕಲಾ ವಿಶ್ವವಿದ್ಯಾಲಯ ಕಾರ್ಯಾರಂಭವಾಗದಿರುವ ಬಗ್ಗೆ.

ಶ್ರೀ ಬಿ.ಬಿ. ಚಿಮ್ಮನಕಟ್ಟಿ (ಬಾದಾಮಿ) : ಮಾನ್ಯ ಅಧ್ಯಕ್ಷರೆ, ಬಾಗಲಕೋಟೆ ಜಿಲ್ಲೆ ಬಾದಾಮಿಯಲ್ಲಿ ಲಲಿತಕಲಾ ವಿಶ್ವವಿದ್ಯಾಲಯವು ಕಾರ್ಯಾರಂಭವಾಗದಿರುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರ ಗಮನ ಸೆಳೆಯುತ್ತೇನೆ.

ಶ್ರೀ ಆರ್.ವಿ. ದೇಶಪಾಂಡೆ (ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು): ಮಾನ್ಯ ಅಧ್ಯಕ್ಷರೆ, ಕರ್ನಾಟಕದ ಲಲಿತಕಲೆಯ ಮುನ್ನಡೆಯನ್ನು ಸಾಧಿಸುವುದು ಸಂಶೋಧನೆ ನಡೆಸುವುದು ದಾಖಲೀಕರಣ ಮತ್ತು ಅಧ್ಯಯನ, ಕಲಾಪ್ರದರ್ಶನ, ಪ್ರಕಟಣೆಯ ಮೂಲಕ ಜನಪ್ರಿಯಗೊಳಿಸುವ ಉದ್ದೇಶಕ್ಕಾಗಿ ಕರ್ನಾಟಕ ರಾಜ್ಯದಲ್ಲಿ ಲಲಿತಕಲಾ ವಿಶ್ವವಿದ್ಯಾಲಯ ಸ್ಥಾಪನೆಗಾಗಿ ಬಾಗಲಕೋಟೆ ಜಿಲ್ಲೆಯ ಬಾದಾಮಿ ಸಮೀಪದ ಖ್ಯಾಡ ಗ್ರಾಮದಲ್ಲಿ ಕರ್ನಾಟಕ ಲಲಿತಕಲಾ ವಿಶ್ವವಿದ್ಯಾಲಯವನ್ನು ಸ್ಥಾಪಿಸಲು ಉದ್ದೇಶಿಸಲಾಗಿರುತ್ತದೆ. ಸದರಿ ವಿಶ್ವವಿದ್ಯಾಲಯವನ್ನು ಪ್ರಾರಂಭಿಸುವ ನಿಟ್ಟಿನಲ್ಲಿ ಒಬ್ಬ ವಿಶೇಷಾಧಿಕಾರಿಯನ್ನು ಸರ್ಕಾರವು ನೇಮಿಸಿದೆ. ಸದರಿ ವಿಶ್ವವಿದ್ಯಾಲಯದ ಸ್ಥಾಪನೆಯ ವಿಷಯವು ಸರ್ಕಾರದ ಪರಿಶೀಲನೆಯಲ್ಲಿದೆ.

8. ವಿಷಯ : ಯಾದಗಿರಿ, ಚಿಕ್ಕಬಳ್ಳಾಪುರ, ರಾಮನಗರ ಮತ್ತು ಜಿಲ್ಲಾ ಕೇಂದ್ರಗಳ ನಗರ ಯೋಜನಾ ಪ್ರಾಧಿಕಾರಗಳನ್ನು ನಗರಾಭಿವೃದ್ಧಿ ಪ್ರಾಧಿಕಾರಗಳನ್ನಾಗಿ ಮೇಲ್ದರ್ಜೆಗೇರಿಸುವ ಬಗ್ಗೆ.